# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 237 |
| ಮಾನ್ಯ ವಿಧಾನ ಪರಿಷತ್ ಸದಸ್ಯರು | ಶ್ರೀ ಯು. ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | ದಿನಾಂಕ: 15.02.2024 |
| ಉತ್ತರಿಸಬೇಕಾದ ಸಚಿವರು | ಮಾನ್ಯ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ ಹಾಗೂ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಪ್ರಸ್ತುತ ರಾಜ್ಯದ ನ್ಯಾಯಾಲಯಗಳಲ್ಲಿ ಎಷ್ಟು ದಿನಗಳು ಲೋಕ್ ಅದಾಲತ್ ನ್ಯಾಯಾಲಯಗಳನ್ನು ಹಮ್ಮಿಕೊಂಡು ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಗುತ್ತಿದೆ? | ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದ ಮೇರೆಗೆ ವರ್ಷದಲ್ಲಿ 04 ಬಾರಿ ಲೋಕ್ ಅದಾಲತ್‌ನ್ನು ರಾಜ್ಯಾದ್ಯಾಂತೆ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ನ್ಯಾಯಾಲಯಗಳಲ್ಲಿ ಹಮ್ಮಿಕೊಂಡು ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಗುತ್ತದೆ. |
| (ಆ) | ಈ ರೀತಿಯ ಹಮ್ಮಿಕೊಳ್ಳುವುದರಿಂದ ಹೆಚ್ಚಿನ ಅನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಹೌದು, ಸಾರ್ವಜನಿಕರಿಗೆ ಲೋಕ್ ಅದಾಲತ್ ನಿಂದ ಹೆಚ್ಚಿನ ಸಮಯ, ಹಣ ಉಳಿಯುವುದಲ್ಲದೆ ಸಾರ್ವಜನಿಕರಿಗೆ ಅನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| (ಇ) | ಬಂದಿದ್ದಲ್ಲಿ ಲೋಕ್ ಅದಾಲತ್ ನ್ಯಾಯಾಲಯಗಳ ಸಂಖ್ಯೆಯನ್ನು ಹೆಚ್ಚು ಮಾಡುವುದಕ್ಕೆ ಏನು ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ? | ಪ್ರಕರಣಗಳ ಶೀಘ್ರ ವಿಲೇವಾರಿಗಾಗಿ ಲೋಕ್ ಅದಾಲತ್‌ಗಳನ್ನು ಆಯೋಜಿಸುವ ಅವಶ್ಯಕತೆ ಇದ್ದಲ್ಲಿ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ಅನುಮತಿಯ ಮೇರೆಗೆ ನಿಯಮಾನುಸಾರ ಕ್ರಮ ಕೈಗೊಳ್ಳಲಾಗುತ್ತಿದೆ. |

**ಸಂಖ್ಯೆ: ಲಾ-ಎಲ್ಎಡಿ/40/2024**

**(ಎಚ್. ಕೆ. ಪಾಟೀಲ)**
ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳ
ಸಂಸದೀಯ ವ್ಯವಹಾರಗಳು ಮತ್ತು
ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು

ಎಚ್.ಕೆ ಪಾಟೀಲ
ಕಾನೂನು, ನ್ಯಾಯ, ಮಾನವ ಹಕ್ಕುಗಳು
ಸಂಸದೀಯ ವ್ಯವಹಾರಗಳು, ಶಾಸನ ರಚನೆ
ಹಾಗೂ ಪ್ರವಾಸೋದ್ಯಮ ಸಚಿವರು